**ಕರ್ನಾಟಕ ಸರ್ಕಾರ**
**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/320/ಸಪ್ರಾನೇ/2017-18/ನೇವಿ-1

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:29.11.2017.

# ಆದೇಶ

ವಿಷಯ: ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ **ವಾಣಿಜ್ಯಶಾಸ್ತ್ರ ಮತ್ತು ಪತ್ರಿಕೋದ್ಯಮ** ವಿಷಯಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ಸ್ಥಳ ನಿಯುಕ್ತಿ ಆದೇಶ ನೀಡುವ ಬಗ್ಗೆ.

ಉಲ್ಲೇಖ 1) ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/33/ಡಿಸಿಇ/2017 ದಿ:04.02.2017.
2) ಸರ್ಕಾರದ ಪತ್ರ ಸಂಖ್ಯೆ:ಇಡಿ/33/ಡಿಸಿಇ/2017, ದಿ:07.02.2017.
3) ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/128/ಡಿಸಿಇ/2017 (11) ಮತ್ತು (12) ದಿನಾಂಕ:24.10.2017.

*****

**ಪ್ರಸ್ತಾವನೆ:**

ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ **ವಾಣಿಜ್ಯಶಾಸ್ತ್ರ ಮತ್ತು ಪತ್ರಿಕೋದ್ಯಮ** ವಿಷಯಗಳಲ್ಲಿ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇರ ನೇಮಕಾತಿಗೆ ಆಯ್ಕೆ ಪ್ರಾಧಿಕಾರವಾದ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು, ಸರ್ಕಾರಕ್ಕೆ ಸಲ್ಲಿಸಿದ ಅಂತಿಮ ಆಯ್ಕೆ ಪಟ್ಟಿಯನ್ನು ಸರ್ಕಾರ ದಿನಾಂಕ:04.02.2017ರ ಅಧಿಸೂಚನೆ ಸಂಖ್ಯೆ:ಇಡಿ/33/ಡಿಸಿಇ/2017ರಲ್ಲಿ ಪ್ರಕಟಿಸಿದೆ. ಕಾಲೇಜು ಶಿಕ್ಷಣ ಇಲಾಖಾ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ) (ನೇಮಕಾತಿ) (ವಿಶೇಷ)-ನಿಯಮಗಳು 2014ರ ನಿಯಮ-9ರ ಉಪ-ನಿಯಮ (2) ಮತ್ತು (3) ಅನುಸಾರ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳ ಅರ್ಹತೆಯ ದೃಢೀಕರಣಕ್ಕೆ ಸಂಬಂಧಿಸಿದಂತೆ, ಅಗತ್ಯ ವಿಚಾರಣೆಗಳು ಪೂರ್ಣಗೊಂಡಿರುವ ಅಭ್ಯರ್ಥಿಗಳಿಗೆ ಉಲ್ಲೇಖ(3)ರ ಅಧಿಸೂಚನೆಗಳಲ್ಲಿ ಸಹಾಯಕ ಪ್ರಾಧ್ಯಾಪಕರಾಗಿ ಆದೇಶ ಹೊರಡಿಸಲಾಗಿದೆ.

ಉಲ್ಲೇಖ(3)ರ ಸರ್ಕಾರದ ಅಧಿಸೂಚನೆಗಳ ಪ್ರಕಾರ ನೇಮಕಾತಿ ಹೊಂದಿರುವ **ವಾಣಿಜ್ಯಶಾಸ್ತ್ರ ಮತ್ತು ಪತ್ರಿಕೋದ್ಯಮ** ವಿಷಯಗಳ ಸಹಾಯಕ ಪ್ರಾಧ್ಯಾಪಕರುಗಳಿಗೆ ಸ್ಥಳ ನಿಯುಕ್ತಿ ಕೌನ್ಸಿಲಿಂಗ್‌ನ್ನು ದಿನಾಂಕ:18.11.2017ರಂದು ಏರ್ಪಡಿಸಲಾಗಿತ್ತು. ಸಹಾಯಕ ಪ್ರಾಧ್ಯಾಪಕರುಗಳು ಕೌನ್ಸಿಲಿಂಗ್‌ನಲ್ಲಿ ಈ ಕೆಳಕಂಡಂತೆ ಅವರುಗಳ ಹೆಸರಿನ ಮುಂದೆ ತಿಳಿಸಿರುವ ಕಾಲೇಜನ್ನು ಆಯ್ಕೆಮಾಡಿಕೊಂಡಿದ್ದು, ಅವರುಗಳಿಗೆ ಯುಜಿಸಿ ವೇತನ ಶ್ರೇಣಿ ರೂ.15600-39100+6000(ಎಜಿಪಿ)ರಲ್ಲಿ ಕೆಲವೊಂದು ಷರತ್ತು ವಿಧಿಸಿ ಸ್ಥಳ ನಿಯುಕ್ತಿಗೊಳಿಸಲಾಗಿದೆ.

ಸ್ಥಳ ನಿಯುಕ್ತಿಗೊಳಿಸಲಾದ ಅಭ್ಯರ್ಥಿಗಳು ಅವರ ಹೆಸರಿನ ಮುಂದೆ ತಿಳಿಸಿರುವ ಕಾಲೇಜಿನಲ್ಲಿ ಕರ್ತವ್ಯಕ್ಕೆ ಹಾಜರಾಗುವಂತೆ ಸೂಚಿಸಲಾಗಿದೆ.

**ವಾಣಿಜ್ಯಶಾಸ್ತ್ರ- ಹೈದ್ರಾಬಾದ್-ಕರ್ನಾಟಕ (ಸ್ಥಳೀಯ ವೃಂದ)**

| ಕ್ರಮ ಸಂಖ್ಯೆ | ಹೆಸರು ಶ್ರೀ/ಶ್ರೀಮತಿ | ವಿಷಯ | ದಿನಾಂಕ:18.11.2017ರಂದು ನಡೆದ ಸ್ಥಳ ನಿಯುಕ್ತಿ ಕೌನ್ಸಿಲಿಂಗ್‌ನಲ್ಲಿ ಆಯ್ಕೆ ಮಾಡಿಕೊಂಡಿರುವ ಕಾಲೇಜಿನ ಹೆಸರು ಮತ್ತು ಸ್ಥಳ |
|---|---|---|---|
| 1 | ಉಮಾಕಾಂತ ಗಣಪತಿ | ವಾಣಿಜ್ಯಶಾಸ್ತ್ರ | ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು, ಬೀದರ |
| 2 | ಮುರುಗೇಶ.ಟಿ.ಎಂ. | ವಾಣಿಜ್ಯಶಾಸ್ತ್ರ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹೂವಿನಹಡಗಲಿ, ಬಳ್ಳಾರಿ ಜಿಲ್ಲೆ. |

**ವಾಣಿಜ್ಯಶಾಸ್ತ್ರ ಸಾಮಾನ್ಯ (ಮಿಕ್ಕುಳಿದ ವೃಂದ)**

| ಕ್ರಮ ಸಂಖ್ಯೆ | ಹೆಸರು ಶ್ರೀ/ಶ್ರೀಮತಿ | ವಿಷಯ | ದಿನಾಂಕ:18.11.2017ರಂದು ನಡೆದ ಸ್ಥಳ ನಿಯುಕ್ತಿ ಕೌನ್ಸಿಲಿಂಗ್‌ನಲ್ಲಿ ಆಯ್ಕೆ ಮಾಡಿಕೊಂಡಿರುವ ಕಾಲೇಜಿನ ಹೆಸರು ಮತ್ತು ಸ್ಥಳ |
|---|---|---|---|
| 1 | ಅಕ್ಕಿ ಮಾರುತಿ | ವಾಣಿಜ್ಯಶಾಸ್ತ್ರ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಗಂಗಾವತಿ, ಕೊಪ್ಪಳ ಜಿಲ್ಲೆ |
| 2 | ಯಮನೂರ | ವಾಣಿಜ್ಯಶಾಸ್ತ್ರ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಸಿಂಧನೂರು, ರಾಯಚೂರು ಜಿಲ್ಲೆ |
| 3 | ಸುಮಿತ್ರ.ಎಸ್.ವಿ. | ವಾಣಿಜ್ಯಶಾಸ್ತ್ರ | ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು, ಕೊಪ್ಪಳ, ಕೊಪ್ಪಳ ಜಿಲ್ಲೆ |

**ಪತ್ರಿಕೋದ್ಯಮ ಸಾಮಾನ್ಯ (ಮಿಕ್ಕುಳಿದ ವೃಂದ)**

| ಕ್ರಮ ಸಂಖ್ಯೆ | ಹೆಸರು ಶ್ರೀ/ಶ್ರೀಮತಿ | ವಿಷಯ | ದಿನಾಂಕ:18.11.2017ರಂದು ನಡೆದ ಸ್ಥಳ ನಿಯುಕ್ತಿ ಕೌನ್ಸಿಲಿಂಗ್‌ನಲ್ಲಿ ಆಯ್ಕೆ ಮಾಡಿಕೊಂಡಿರುವ ಕಾಲೇಜಿನ ಹೆಸರು ಮತ್ತು ಸ್ಥಳ |
|---|---|---|---|
| 1 | ಲಕ್ಷ್ಮಿ.ಆರ್. | ಪತ್ರಿಕೋದ್ಯಮ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ದಾವಣಗೆರೆ |

**ಷರತ್ತುಗಳು:**

1) ಇದು ಸ್ಪರ್ಧಾತ್ಮಕ ಪರೀಕ್ಷೆಯ ಆಧಾರದ ಮೇಲೆ ಮಾಡಿರುವ ನೇರ ನೇಮಕಾತಿಯಾಗಿರುವುದರಿಂದ ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆ) (ನೇಮಕಾತಿ) (ವಿಶೇಷ)-ನಿಯಮಗಳು 2014ರ ನಿಯಮ-9ರ ಉಪನಿಯಮ (2) ಮತ್ತು (3) ರೊಂದಿಗೆ ಓದಿಕೊಂಡಂತೆ ಕರ್ನಾಟಕ ಸರ್ಕಾರಿ ನೌಕರರ (ಜ್ಯೇಷ್ಠತೆ) ನಿಯಮಗಳು, 1957ರ ನಿಯಮ 5ರ ಅನುಸಾರ ಈ ನೇಮಕಾತಿಯ ಸಂದರ್ಭದಲ್ಲಿ ದಿನಾಂಕ:04.02.2017ರ ಅಧಿಸೂಚನೆಯಲ್ಲಿ ಸರ್ಕಾರ ಪ್ರಕಟಿಸಿರುವ ಆಯ್ಕೆ ಪಟ್ಟಿಯಲ್ಲಿನ ಜ್ಯೇಷ್ಠತೆಯು ಅಂತಿಮವಾಗಿರುತ್ತದೆ. ಯಾವುದೇ ಅಭ್ಯರ್ಥಿಯು ಕರ್ತವ್ಯಕ್ಕೆ ಹಾಜರಾದ ದಿನಾಂಕವನ್ನಾಧರಿಸಿ ಜ್ಯೇಷ್ಠತೆಯನ್ನು ಕ್ಲೈಮು ಮಾಡುವ ಹಕ್ಕುಳ್ಳವನಾಗಿರುವುದಿಲ್ಲ.
2) ಮೇಲೆ ತಿಳಿಸಿರುವ ಅಭ್ಯರ್ಥಿಗಳು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಿರುವ ಸ್ಥಳನಿಯುಕ್ತಿ ಆದೇಶವನ್ನು ಡೌನ್‌ಲೋಡ್ ಮಾಡಿಕೊಂಡು ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾದ ದಿನಾಂಕದಿಂದ 15 ದಿವಸಗಳೊಳಗಾಗಿ ಸ್ಥಳನಿಯುಕ್ತಿಗೊಳಿಸಿದ ಕಾಲೇಜಿನ ಪ್ರಾಂಶುಪಾಲರಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವುದು. ತಪ್ಪಿದಲ್ಲಿ ಅಭ್ಯರ್ಥಿಗಳ ನೇಮಕಾತಿ ಆದೇಶ ತನ್ನತಾನೇ ರದ್ದಾಗುತ್ತದೆ.
3) ಅಭ್ಯರ್ಥಿಗಳು ಸ್ಥಳನಿಯುಕ್ತಿಗೊಳಿಸಿದ ಕಾಲೇಜಿನ ಪ್ರಾಂಶುಪಾಲರ ಸಮಕ್ಷಮದಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವ ಸಮಯದಲ್ಲಿ ತಮ್ಮ ವಿದ್ಯಾರ್ಹತೆಗೆ ಸಂಬಂಧಪಟ್ಟ ಮೂಲ ದಾಖಲಾತಿಗಳನ್ನು ಹಾಜರುಪಡಿಸತಕ್ಕದ್ದು.
4) ಈ ನೇಮಕಾತಿಯು ಸ್ಥಳನಿಯುಕ್ತಿಗೊಳಿಸಿದ ಹುದ್ದೆಯಲ್ಲಿ ಅಭ್ಯರ್ಥಿಯು ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಎರಡು ವರ್ಷಗಳ ಪರೀಕ್ಷಾರ್ಥ ಅವಧಿಯನ್ನು ತೃಪ್ತಿಕರವಾಗಿ ಪೂರೈಸುವ ಷರತ್ತಿಗೊಳಪಟ್ಟಿರುತ್ತದೆ.
5) ಅಭ್ಯರ್ಥಿಯು ಪರೀಕ್ಷಾರ್ಥ ಅವಧಿಯಲ್ಲಿ ಅಕೌಂಟ್ಸ್ ಹೈಯರ್ ಹಾಗೂ ಜನರಲ್ ಲಾ ಇಲಾಖಾ ಪರೀಕ್ಷೆಗಳಲ್ಲಿ ಹಾಗೂ ನಿಯಮಾನುಸಾರ ಕಡ್ಡಾಯ ಕನ್ನಡ ಭಾಷಾ ಹಾಗೂ ಇತರೆ ಪರೀಕ್ಷೆಗಳಲ್ಲಿ ಉತ್ತೀರ್ಣರಾಗತಕ್ಕದ್ದು.
6) ನೇಮಕಾತಿಗೊಂಡ ಅಭ್ಯರ್ಥಿಗಳಿಗಾಗಿ ಕೈಗೊಳ್ಳಲಾಗುವ ಫೌಂಡೇಶನ್ ಕೋರ್ಸ್‌ಗೆ (ಬುನಾದಿ ತರಬೇತಿ) ಹಾಜರಾಗುವುದು ಕಡ್ಡಾಯವಾಗಿರುತ್ತದೆ.
7) ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಅವಶ್ಯಕತೆ ಇರುವ ಓರಿಯಂಟೇಶನ್ ಮತ್ತು ರಿಫ್ರೆಶರ್ ಕೋರ್ಸ್ ತರಬೇತಿಯನ್ನು ಪೂರೈಸತಕ್ಕದ್ದು.
8) ಅಭ್ಯರ್ಥಿಯು ಸ್ಥಳನಿಯುಕ್ತಿಗೊಳಿಸಿದ ಕಾಲೇಜಿನಲ್ಲಿ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ನಿಯಮಾನುಸಾರ ವೇತನ ಹಾಗೂ ಇತರೆ ಸೇವಾ ಸೌಲಭ್ಯಗಳನ್ನು ಪಡೆಯಲು ಅರ್ಹರಿರುತ್ತಾರೆ.
9) ಅಭ್ಯರ್ಥಿಗಳು ಕಾರ್ಯವರದಿ ಮಾಡಿಕೊಳ್ಳಲು ಹಾಗೂ ಸ್ಥಳನಿಯುಕ್ತಿಗೊಳಿಸಿದ ಕಾಲೇಜಿನಲ್ಲಿ ಕರ್ತವ್ಯಕ್ಕೆ ಹಾಜರಾಗಲು ಯಾವುದೇ ಪ್ರಯಾಣ ಭತ್ಯೆ ಇತ್ಯಾದಿ ಪಡೆಯಲು ಅರ್ಹರಿರುವುದಿಲ್ಲ.
10) ಮೇಲೆ ನಮೂದಿಸಿರುವ ಅಭ್ಯರ್ಥಿಗಳು ದಿನಾಂಕ:01.04.2006ರ ನಂತರ ಸರ್ಕಾರಿ ಸೇವೆಗೆ ಸೇರಿರುವುದರಿಂದ ಅವರು ನಿಯಮಾನುಸಾರ ಹೊಸ ಪಿಂಚಣಿ ಯೋಜನೆ ವ್ಯಾಪ್ತಿಗೆ ಒಳಪಟ್ಟಿರುತ್ತಾರೆ.

11) ಪರೀಕ್ಷಾರ್ಥ ಅವಧಿಯಲ್ಲಿ ಯಾವುದೇ ವರ್ಗಾವಣೆಗೆ ಅವಕಾಶವಿರುವುದಿಲ್ಲ.

12) ಸದರಿ ನೇಮಕಾತಿ ಹಾಗೂ ಸ್ಥಳನಿಯುಕ್ತಿ ಆದೇಶವು ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯದ ಎಲ್ಲಾ ಪೀಠಗಳಲ್ಲಿ ಹಾಗೂ ಮಾನ್ಯ ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯಲ್ಲಿ ದಾಖಲಾಗಿರುವ ರಿಟ್ ಅರ್ಜಿ/ಅರ್ಜಿಗಳಲ್ಲಿ ಮಾನ್ಯ ನ್ಯಾಯಾಲಯಗಳು ನೀಡುವ ಅಂತಿಮ ತೀರ್ಪಿನ ಪಾಲನೆಗೆ ಒಳಪಟ್ಟಿರುತ್ತದೆ.

13) ಕರ್ನಾಟಕ ಸಿವಿಲ್ ಸೇವೆ (ಸಾಮನ್ಯ ನೇಮಜಾತಿ) ನಿಯಮಗಳು, 1977 ಅಥವಾ ಕರ್ನಾಟಕ ರಾಜ್ಯ ಸಿವಿಲ್ ಸೇವಾ ಅಧಿನಿಯಮ 1978 (1990ರ ಕರ್ನಾಟಕ ಅಧಿನಿಯಮ (4)ರಲ್ಲಿ ನಿರ್ದಿಷ್ಟಪಡಿಸಿರುವಂತೆ ಸ್ಥಳ ನಿಯುಕ್ತಿ ಆದೇಶ ಪಡೆದ ಅಭ್ಯರ್ಥಿಯು ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಆರು ತಿಂಗಳ ಅವಧಿಯೊಳಗಾಗಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗತಕ್ಕದ್ದು. ನಿಗದಿತ ಅವಧಿಯೊಳಗೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗದೇ ಇದ್ದಲ್ಲಿ ವಾರ್ಷಿಕ ವೇತನ ಬಡ್ತಿಗೆ ಅರ್ಹರಾಗುವುದಿಲ್ಲ.

**"ಕರಡು ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ."**

Shilpa

**ಕಾಲೇಜು ಶಿಕ್ಷಣ ಮುಖ್ಯ ಆಡಳಿತಾಧಿಕಾರಿಗಳು**

**ಇವರಿಗೆ:**

1) ಮೇಲ್ಕಾಣಿಸಿದ ಅಭ್ಯರ್ಥಿಗಳಿಗೆ – ಅಗತ್ಯ ಕ್ರಮಕ್ಕಾಗಿ ಅಭ್ಯರ್ಥಿಗಳಿಗೆ ಪ್ರತ್ಯೇಕವಾಗಿ ಸ್ಥಳನಿಯುಕ್ತಿ ಆದೇಶವನ್ನು ಕಳುಹಿಸಿಕೊಡಲಾಗುವುದಿಲ್ಲ. ಇಲಾಖೆಯ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳುವುದು.

2) ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರುಗಳಿಗೆ:- ತಮ್ಮ ಕಾಲೇಜಿಗೆ ಸ್ಥಳನಿಯುಕ್ತಿಸಲಾದ ಅಭ್ಯರ್ಥಿಯನ್ನು ಕರ್ತವ್ಯಕ್ಕೆ ಹಾಜರುಪಡಿಸಿಕೊಳ್ಳುವ ಮೊದಲು ಶೈಕ್ಷಣಿಕ ಹಾಗೂ ಇತರೆ ಅಗತ್ಯ ದಾಖಲಾತಿಗೆ ಸಂಬಂಧಿಸಿದಂತೆ, ಮೂಲ ದಾಖಲಾತಿಗಳನ್ನು ಕಡ್ಡಾಯವಾಗಿ ಪರಿಶೀಲಿಸತಕ್ಕದ್ದು. ದಾಖಲಾತಿಗಳ ಪರಿಶೀಲನೆಯ ಸಂದರ್ಭದಲ್ಲಿ ಯಾವುದಾದರೂ ನ್ಯೂನತೆಗಳು ಕಂಡು ಬಂದಲ್ಲಿ ಕೂಡಲೇ ಈ ಕಛೇರಿಗೆ ವರದಿ ಮಾಡುವುದು.

**ಪ್ರತಿಯನ್ನು:**

1) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಕರ್ನಾಟಕ ಸರ್ಕಾರದ ಸಚಿವಾಲಯ, ಬಹುಮಹಡಿಗಳ ಕಟ್ಟಡ, ಬೆಂಗಳೂರು- ಮಾಹಿತಿಗಾಗಿ.
2) ಕರ್ನಾಟಕ ಮಹಾಲೇಖಪಾಲರು (ಎ ಮತ್ತು ಇ, ಲೆಕ್ಕಪರಿಶೋಧನೆ-1, ಲೆಕ್ಕಪರಿಶೋಧನೆ-2), ಬೆಂಗಳೂರು
3) ಆಡಳಿತಾಧಿಕಾರಿಗಳು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು.
4) ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು/ ಮೈಸೂರು/ ಮಂಗಳೂರು / ಧಾರವಾಡ/ ಗುಲ್ಬರ್ಗಾ / ಶಿವಮೊಗ್ಗ,
5) ಮ್ಯಾನೇಜರ್/ಅಧೀಕ್ಷಕರು, ವರ್ಗಾವಣೆ ಮತ್ತು ನಿಯೋಜನೆ ವಿಭಾಗ, ಕಾನೂನು ಕೋಶ ವಿಭಾಗ, ಸೇವಾ ವಿಭಾಗ-1 &2, ಮತ್ತು ಬಡ್ತಿ ಮತ್ತು ಸ್ಥಾನೀಕರಣ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು - ಮಾಹಿತಿಗಾಗಿ.
6) ಮ್ಯಾನೇಜರ್, ಮಾಹಿತಿ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಸದರಿ ಆದೇಶವನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ತಿಳಿಸಲಾಗಿದೆ.
7) ಕಛೇರಿ ಪ್ರತಿ.